**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ.,ಹುಣಸೂರು.**

ಓ.ಎಸ್.48 /2018

ಸಾಕ್ಷಿಯನ್ನು ದಿಃ **06.11.2025** ರಂದು ಕರೆಸಿ ಪ್ರಮಾಣವಚನ ಬೋದಿಸಲಾಯಿತು.

**ಅರ್ಜಿಗಳ ಮೇಲಿನ ಆದೇಶದಂತೆ ಮುಂದುವರಿದ ಪಾಟೀ ಸವಾಲುಃ ವಾದಿ ಪರಃ ಶ್ರೀ**. HPM **ಪರ ಶ್ರೀ**. MKS **ವಕೀಲರಿಂದ**:

ನಾನು ಹಾಜರುಪಡಿಸಿದ Indian Overseas Bankನಲ್ಲಿರುವ ನನ್ನ ಖಾತೆಗೆ ಸಂಬಂಧಿಸಿದ ದಾಖಲೆಗಳ ಪ್ರಕಾರ ನಾನು ಸದರಿ ಬ್ಯಾಂಕ್ ನಲ್ಲಿ ಯಾವುದೇ ಹಣಕಾಸಿನ ವ್ಯವಹಾರ ಮಾಡಿಲ್ಲ ಎಂದರೆ ಸರಿಯಲ್ಲ. ಸದರಿ ಖಾತೆಗಳಲ್ಲಿ ನಾನು ಈ ವ್ಯವಹಾರದ ಸಮಯದಲ್ಲಿ ರೂ.500 ಕ್ಕೂ ಹೆಚ್ಚಿನ ಹಣದ ವ್ಯವಹಾರ ಮಾಡಿಲ್ಲ ಎಂದರೆ ಮಾಡಿದ್ದೇನೆ. ನಾನು ಹಾಜರುಪಡಿಸಿದ ಬ್ಯಾಂಕ್ ಸ್ಟೇಟ್ಮೆಂಟ್ ಗಳನ್ನು ಈ ಹಿಂದೆಯೇ ನಿಶಾನೆಯಾಗಿ ಗುರುತಿಸಲಾಗಿದೆ ಎಂದರೆ ಸರಿಯಲ್ಲ. ನಾನು ವಾದಿಯ ವಿರುದ್ಧ ದೂರು ಕೊಟ್ಟ ಬಗ್ಗೆ ದಾಖಲೆಗಳನ್ನು ಈಗಾಗಲೇ ನಿಶಾನೆಯಾಗಿ ಗುರುತಿಸಿದ್ದರೂ ಸಹ ಕಾಲಹರಣ ಮಾಡಲು ಪುನಃ ಅದೇ ದಾಖಲೆಗಳನ್ನು ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಕೊಟ್ಟ ದೂರಿನ ಮೇರೆಗೆ ಪೋಲಿಸರು ನನಗೆ ಬುದ್ದಿವಾದ ಹೇಳಿ ವಾದಿಯ ಜೊತೆ ಇರುವ ವ್ಯವಹಾರವನ್ನು ಬಗೆಹರಿಸಿಕೊಳ್ಳಿ ಎಂದು ಹೇಳಿ ಕಳುಹಿಸಿದರು ಎಂದರೆ ಸರಿಯಲ್ಲ. ನಿಡಿ.29ರ ಡೈರಿಯನ್ನು ವಾದಿ ಬರೆದುಕೊಡದೇ ಇದ್ದರೂ ಸಹ ನಾನು ಸೃಷ್ಟಿಸಿಕೊಂಡು ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ನಾನು ವಾದಿಯಿಂದ ಪಡೆದುಕೊಂಡ ಹಣವನ್ನು ಯಾವುದೇ ರೂಪದಲ್ಲಿ ಹಿಂದಿರುಗಿಸದೇ ಇದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ದಾವೆಯಿಂದ ತಪ್ಪಿಸಿಕೊಳ್ಳುವ ಸಲುವಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

ಓ ಹೇ ಕೇ ಸ ಇದೆ.,

(ಅನಿತ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆ.ಎಂ.ಎಫ್.ಸಿ.,ಹುಣಸೂರು.